# ಧರ್ಮೇಗೌಡ, ಮಾಧುಸ್ವಾಮಿ ವಿರುದ್ಧ ಕ್ರಮಕ್ಕೆ ಪತ್ರ

ಪ್ರಜಾವಾಣಿ ವಾರ್ತೆ

20-12-20

ಬೆಂಗಳೂರು: ವಿಧಾನಪರಿಷತ್‌ನ ಸಭಾ ಸಂಪ್ರದಾಯವನ್ನು ಉಲ್ಲಂಘಿಸಿ ಸಭಾಪತಿ ಪೀಠದಲ್ಲಿ ಆಸೀನರಾದ ಉಪಸಭಾಪತಿ ಧರ್ಮೇಗೌಡ ಮತ್ತು ಅವರು ಪೀಠದಲ್ಲಿ ಕೂರಲು ಪ್ರಚೋದಿಸಿದ ಉಪಮುಖ್ಯಮಂತ್ರಿ ಡಾ.ಅಶ್ವತ್ಥನಾರಾಯಣ ಹಾಗೂ ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ವಿರುದ್ಧ ಕ್ರಮ ಜರುಗಿಸಬೇಕು ಎಂದು ಸಭಾಪತಿಯವರಿಗೆ ಕಾಂಗ್ರೆಸ್ ದೂರು ನೀಡಿದೆ.

ಡಿ.15 ರಂದು ಪರಿಷತ್ತಿನಲ್ಲಿ ನಡೆದ ಘಟನಾವಳಿಗಳಿಗೆ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರೇ ಕಾರಣ ಎಂದು ಕಾಂಗ್ರೆಸ್‌ನ ಪಿ.ಆರ್.ರಮೇಶ್ ಅವರು ಪತ್ರದಲ್ಲಿ ಆರೋಪಿಸಿದ್ದಾರೆ.

ಸಭಾಪತಿಯವರು ಸದನದೊಳಗೆ ಪ್ರವೇಶಿಸಲು ಅಡ್ಡಿಪಡಿಸುವ ಉದ್ದೇಶದಿಂದ ಕಾನೂನು ಕೈಗೆತ್ತಿಕೊಂಡು ಸಭಾಪತಿ ಪ್ರವೇಶದ ಬಾಗಿಲನ್ನು ಮುಚ್ಚಿ ಬಲ ಪ್ರಯೋಗಿಸಿದ ಬಿಜೆಪಿಯ ವೈ.ಎ.ನಾರಾಯಣಸ್ವಾಮಿ, ಅರುಣ್ ಶಹಾಪುರ, ಎಂ.ಕೆ. ಪ್ರಾಣೇಶ್ ಅವರನ್ನು ಸದಸ್ಯತ್ವದಿಂದ ಉಚ್ಚಾಟಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಸಭಾಪತಿ ಪೀಠದ ಬಳಿ ಗುಂಪುಗೂಡಿ ಬಲ ಪ್ರಯೋಗ ಮಾಡಿದ ಬಿಜೆಪಿಯ ಆಯನೂರು ಮಂಜುನಾಥ್, ಎನ್.ರವಿಕುಮಾರ್, ತೇಜಸ್ವಿನಿ ಗೌಡ, ಪುಟ್ಟಣ್ಣ, ಸುನೀಲ್ ವಲ್ಯಾಪುರೆ, ಜೆಡಿಎಸ್‌ನ ರಮೇಶ್ ಗೌಡ, ಶ್ರೀಕಂಠೇಗೌಡ ಅವರು ಅಸಂಸದೀಯ ರೀತಿಯಲ್ಲಿ ವರ್ತಿಸಿದ್ದಾರೆ. ಆದ್ದರಿಂದ, ಇವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ರಮೇಶ್ ಆಗ್ರಹಿಸಿದ್ದಾರೆ.

ಉಪಸಭಾಪತಿ ಸಭಾಪತಿ ಪೀಠದಲ್ಲಿ ಆಸೀನರಾಗುವುದನ್ನು ತಡೆಯುವಲ್ಲಿ ವಿಫಲರಾದ ಪರಿಷತ್ ಕಾರ್ಯದರ್ಶಿ ಮತ್ತು ಮಾರ್ಷಲ್‌ಗಳು ಯಾವುದೇ ಕ್ರಮ ತೆಗೆದುಕೊಳ್ಳದೇ ಇದ್ದ ಕಾರಣ, ಇವರೆಲ್ಲರ ವಿರುದ್ಧವೂ ಕ್ರಮ ಜರುಗಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.